**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 615(692) |
| ಸದಸ್ಯರ ಹೆಸರು | ಶ್ರೀ ಎಸ್. ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 19.09.2022 |
| ಉತ್ತರಿಸಬೇಕಾದ ಸಚಿವರು | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಅನುಧಾನಿತ ಶಾಲೆಗಳ ಮಾನ್ಯತೆ ನವೀಕರಣ ಮಾಡುವ ಸಂದರ್ಭದಲ್ಲಿ ಸರ್ಕಾರ ಅಗ್ನಿ ಸುರಕ್ಷತಾ ಪ್ರಮಾಣ ಪತ್ರ ಮತ್ತು ಕಟ್ಟಡ ಸುರಕ್ಷತಾ ಪ್ರಮಾಣ ಪತ್ರ ಕಡ್ಡಾಯಗೊಳಿಸಿರುವುದರಿಂದ, ಈ ಶಾಲೆಗಳಿಗೆ ಬಹಳ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಮಾನ್ಯ ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:483/2014, ದಿನಾಂಕ: 13.04.2009ರ ತೀರ್ಪಿನನ್ವಯ ನ್ಯಾಷನಲ್ ಬಿಲ್ಡಿಂಗ್ ಕೋಡ್ ಆಫ್ ಇಂಡಿಯಾ ಇವರ ನಿಬಂಧನೆಗಳನ್ವಯ ಆದೇಶ ಸಂಖ್ಯೆ: ಇಡಿ 587 2018, ದಿನಾಂಕ:19-11-2018ರಲ್ಲಿ ಯಾವುದೇ ಶಾಲೆಯು ಮಾನ್ಯತೆಯನ್ನು ಪಡೆಯುವ ಮೊದಲು ಮಕ್ಕಳ ಸುರಕ್ಷತೆ ದೃಷ್ಟಿಯಿಂದ ಕಟ್ಟಡ ಸುರಕ್ಷತೆ ಮತ್ತು ಅಗ್ನಿ ಸುರಕ್ಷತೆ ಪ್ರಮಾಣ ಪತ್ರವನ್ನು ಸಂಬಂಧಿಸಿದ ಪ್ರಾಧಿಕಾರದಿಂದ ಪಡೆಯುವುದನ್ನು ಕಡ್ಡಾಯಗೊಳಿಸಲಾಗಿದೆ. ಈ ಎಲ್ಲಾ ಸುರಕ್ಷತಾ ಕ್ರಮಗಳನ್ನು ಅಳವಡಿಸಿಕೊಂಡಿರುವ ಬಗ್ಗೆ ಖಚಿತಪಡಿಸಿಕೊಂಡು ಮಾನ್ಯತೆಯನ್ನು ನೀಡುವ ಷರತ್ತನ್ನು ವಿಧಿಸಲಾಗಿರುತ್ತದೆ.<br><br>ದಿನಾಂಕ: 17/03/2022 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಖಾಸಗಿ, ಅನುದಾನಿತ ಅನುದಾನ ರಹಿತ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳ ಈಗಾಗಲೇ ನಿರ್ಮಾಣಗೊಂಡಿರುವ ಹಳೆಯ ಕಟ್ಟಡಗಳಿಗೆ(Structural Stability) ನಿರಾಕ್ಷೇಪಣಾ ಪ್ರಮಾಣಪತ್ರ ವಿತರಣೆ ಹಾಗೂ ಅಗ್ನಿ ಸುರಕ್ಷತಾ ಪ್ರಮಾಣ ಪತ್ರ ನೀಡುವ ಪ್ರಕ್ರಿಯೆಗಳನ್ನು ಸರಳೀಕರಣಗೊಳಿಸಲು ಸೂಚಿಸಿರುವಂತೆ ಕ್ರಮವಹಿಸಲು ಇಪಿ 43 ಪಿಜಿಸಿ 2022, ದಿನಾಂಕ: 18/05/2022ರಂದು ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ. ಆದ್ದರಿಂದ ಸದರಿ ಪ್ರಮಾಣ ಪತ್ರಗಳನ್ನು ಸಲ್ಲಿಸುವುದನ್ನು ಹಿಂಪಡೆಯುವ ಪ್ರಶ್ನೆ ಉದ್ಭವಿಸುವುದಿಲ್ಲ. |
| ಆ) | ಅನುದಾನಿತ ಶಾಲೆಗಳ ಮಾನ್ಯತೆ ನವೀಕರಣ ಸಂದರ್ಭದಲ್ಲಿ ಈ ಎರಡು ಪ್ರಮಾಣ ಪತ್ರಗಳನ್ನು ಸಲ್ಲಿಸುವ ಆದೇಶವನ್ನು ಪುನರ್ ಪರಿಶೀಲಿಸಿ ಯಾವ ಸಾಲಿನಿಂದ ಹಿಂಪಡೆಯಲಾಗುವುದು? | |

ಇಪಿ 365 ಪಿಜಿಸಿ 2022

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು